# <u>ಪ್ರಧಾನ ಹಿರಿಯ ಸಿವಿಲ್ ನ್ಯಾಯಾಲಯ ಮತ್ತು ಜೆ.ಎಂ.ಎಫ್.ಸಿ. ಹುಣಸೂರು.</u>

## ಸಿ.ಸಿ. ಸಂಖ್ಯೆಃ 773/2024

**ಸಾಕ್ಷಿಯನ್ನು ದಿಃ 13.01.2026 ರಂದು ಕರೆಸಿ ಪ್ರಮಾಣವಚನ ಬೋದಿಸಲಾಯಿತು.**

| | | | |
|---|---|---|---|
| ಹೆಸರು | ಗಿರೀಶ.ಪಿ | ಸಿಡಬ್ಲ್ಯೂಃ 7 | ಪಿಡಬ್ಲ್ಯೂಃ 6 |
| ತಂದೆಯ ಹೆಸರು | ಪುಟ್ಟಯ್ಯ | | |
| ವಯಸ್ಸು | 49 ವರ್ಷ | | |
| ಕೆಲಸ | ಮುಖ್ಯ ಪೇದೆ, ಹುಣಸೂರು ಪಟ್ಟಣ | | |
| ವಾಸಸ್ಥಳ | ಹುಣಸೂರು. | | |

## <u>ಮುಖ್ಯ ವಿಚಾರಣೆಃ ಮಾನ್ಯ ಸಸಅ ರವರಿಂದಃ</u>

ನಾನು ಕಳೆದ ಮೂರುವರೆ ವರ್ಷಗಳಿಂದ ಹುಣಸೂರು ಪಟ್ಟಣ ಠಾಣೆಯಲ್ಲಿ ಮುಖ್ಯಪೇದೆ ಆಗಿ ಕರ್ತವ್ಯ ನಿರ್ವಹಿಸುತ್ತಿದ್ದೆನೆ.

ದಿಃ 03.12.2023ರಂದು ನಾನು ಠಾಣಾ ಪ್ರಭಾರದಲ್ಲಿದ್ದಾಗ ಬೆಳಿಗ್ಗೆ 11-00ಗಂಟೆಗೆ ಚಾಸಾ-3 ರವರು ಚಾಸಾ-1 ರವರ ಲಿಖಿತ ದೂರನ್ನು ತಂದು ನನ್ನ ಮುಂದೆ ಹಾಜರುಪಡಿಸಿದ ಮೇರೆಗೆ ಅದನ್ನು ಸ್ವೀಕರಿಸಿ ಅದರ ಆಧಾರದ ಮೇಲೆ ಠಾಣಾ ಮೊಕದ್ದಮೆ ಸಂಃ 244/2023ರಲ್ಲಿ ಪ್ರಕರಣ ದಾಖಲಿಸಿ ಪ್ರ.ವ.ವರದಿಯನ್ನು ನ್ಯಾಯಾಲಯಕ್ಕೆ ಹಾಗೂ ಮೇಲಾಧಿಕಾರಿಗಳಿಗೆ ನಿವೇದಿಸಿಕೊಂಡಿರುತ್ತೇನೆ. ನಾನು ಸ್ವೀಕರಿಸಿದ ದೂರು ನಿಪಿ-1ರಲ್ಲಿದ್ದು, ಸಾಕ್ಷಿಯ ಸಹಿಯನ್ನು ನಿಪಿ-1(ಎ) ಎಂದು ಗುರುತಿಸಲಾಯಿತು. ನಾನು ಸಲ್ಲಿಸಿದ ಪ್ರ.ವ.ವರದಿಯನ್ನು ಈಗ ನೋಡುತ್ತಿದ್ದು ನಿಪಿ-4 ಎಂದು, ಸಾಕ್ಷಿಯ ಸಹಿಯನ್ನು ನಿಪಿ-4(ಎ) ಎಂದು ಗುರುತಿಸಲಾಯಿತು. ದಿಃ 04.12.2023 ರಂದು ತನಿಖೆಯನ್ನು ಮುಂದುವರಿಸಿ ಘಟನಾ ಸ್ಥಳಕ್ಕೆ ಭೇಟಿ ಕೊಟ್ಟಾಗ ಪ್ರತ್ಯಕ್ಷ ಸಾಕ್ಷಿ ಮತ್ತು ಪಂಚರು ಹಾಜರಿರದೇ ಇದ್ದ ಕಾರಣ ಮಹಜರು ಕ್ರಮ ಜರುಗಿಸಿರುವುದಿಲ್ಲ. ದಿನಾಂಕಃ 05.12.2023 ರಂದು ಮುಂದಿನ ತನಿಖೆಗಾಗಿ ಕಡತವನ್ನು ಚಾಸಾ-8 ರವರಿಗೆ ಹಸ್ತಾಂತರಿಸಿರುತ್ತೇನೆ.

**<u>ಪಾಟೀ ಸವಾಲುಃ</u> ಆರೋಪಿತರ ಪರ ಶ್ರೀ. DRM ವಕೀಲರಿಂದಃ**

ಚಾಸಾ-1 ರವರ ಪರವಾಗಿ ಚಾಸಾ-3 ರವರು ದೂರನ್ನು ತಂದು ನನ್ನ ಮುಂದೆ ಹಾಜರುಪಡಿಸಿದರು. ಚಾಸಾ-1 ರವರ ಪರವಾಗಿ ದೂರು ನೀಡುತ್ತಿದೇನೆ ಎಂದು ನಿಪಿ-1 ರಲ್ಲಿ ಬರೆಯಲಾಗಿದೆಯೇ ಎಂದರೆ ಇಲ್ಲ. ನಿಪಿ-1ರ ಆದಾರದ ಮೇಲೆ ಪ್ರಕರಣ ದಾಖಲಿಸುವ ಪೂರ್ವದಲ್ಲಿ ನಾನು ತನಿಖೆ ಮಾಡಿಲ್ಲ. ದೂರಿನ ಆಧಾರದ ಮೇಲೆ ತನಿಖೆ ಮಾಡಿದ್ದಲ್ಲಿ ಆರೋಪಿತರ ತಪ್ಪು ಇಲ್ಲ ಎಂದು ಕಂಡು ಬರುತ್ತಿತ್ತು ಎಂದರೆ ಸರಿಯಲ್ಲ. ನಾನು ನಿಪಿ-1ರ ಆಧಾರದ ಮೇಲೆ ತನಿಖೆ ಮಾಡದೇ ಆರೋಪಿತರ ವಿರುದ್ಧ ಸುಳ್ಳು ಪ್ರ.ವ.ವರದಿಯನ್ನು ಸಲ್ಲಿಸಿದ್ದೇನೆ ಎಂದರೆ ಸರಿಯಲ್ಲ. ಘಟನಾ ಸ್ಥಳ ಜನ ದಟ್ಟಣೆ ಇರುವ ಸ್ಥಳ ಎಂದರೆ ಸರಿ. ದಿಃ 04.12.2023 ರಂದು ಮಹಜರು ಮಾಡಲು ಅನುಕೂಲ ಇದ್ದರೂ ಕೂಡ ಆರೋಪಿತರು ತಪ್ಪು ಮಾಡಿಲ್ಲ ಎಂದು ಕಂಡು ಬಂದ ಕಾರಣ ಮಹಜರು ಕ್ರಮ ಜರುಗಿಸಿಲ್ಲ ಎಂದರೆ ಸರಿಯಲ್ಲ. ಆರೋಪಿತರಿಗೆ ತೊಂದರೆ ನೀಡಬೇಕು ಎಂದು ಸುಳ್ಳು ದೂರನ್ನು ಸ್ವೀಕರಿಸಿ ಸುಳ್ಳು ಪ್ರಕರಣ ದಾಖಲಿಸಿದ್ದೇನೆ ಎಂದರೆ ಸರಿಯಲ್ಲ.

**ಮರುವಿಚಾರಣೆಃ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು).

ಓ.ಹೇ.ಕೇ.ಸ.ಇದೆ.

(ಅನಿತ)
ಪ್ರಧಾನ ಹಿರಿಯ ಸಿವಿಲ್ ಜಡ್ಜ್ ಮತ್ತು
ಜೆ.ಎಂ.ಎಫ್.ಸಿ., ಹುಣಸೂರು.